# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 10.02.2011

## ***ಪಾಲಿಕೆಯಿಂದ ರೂ.1000 ಕೋಟಿ ಆಸ್ತಿ ತೆರಿಗೆ ಸಂಗ್ರಹ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಸ್ವತ್ತುಗಳಿಂದ 2010-11ನೇ ಸಾಲಿನಲ್ಲಿ ಏಪ್ರಿಲ್ ತಿಂಗಳಿಂದ ಫೆಬ್ರವರಿ 10, 2011ರ ವರೆಗೆ ರೂ.1000 ಕೋಟಿಗಳ ಆಸ್ತಿ ತೆರಿಗೆಯನ್ನು ಸಂಗ್ರಹ ಮಾಡಲಾಗಿದೆ ಎಂದು ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ತಿಳಿಸಿದ್ದಾರೆ.

2010-11ನೇ ಸಾಲಿನಲ್ಲಿ ರೂ.1500 ಕೋಟಿಗಳನ್ನು ಆಸ್ತಿ ತೆರಿಗೆ ಮೂಲಕ ಸಂಗ್ರಹಿಸಲು ಆಯವ್ಯಯದಲ್ಲಿ ಅಂದಾಜಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ಬೃ.ಬೆಂ.ಮ.ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸ್ವತ್ತುಗಳನ್ನು ಆಸ್ತಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ, ಆಸ್ತಿ ತೆರಿಗೆಯನ್ನು ವಸೂಲು ಮಾಡುವ ಕಾರ್ಯ ಪಾಲಿಕೆಯ ಎಲ್ಲಾ 8 ವಲಯಗಳಲ್ಲಿ ಪ್ರಗತಿಯಲ್ಲಿದ್ದು, ಆಸ್ತಿ ತೆರಿಗೆ ಜಾಲಕ್ಕೆ ಬರದೇ ಇರುವಂತಹ ಸುಮಾರು 3.76 ಲಕ್ಷಗಳ ಆಸ್ತಿಗಳನ್ನು ಪತ್ತೆ ಮಾಡಲಾಗಿರುತ್ತದೆ. ಆಸ್ತಿ ಮಾಲೀಕರಿಗೆ ನೋಟೀಸ್‌ನ್ನು ಜಾರಿ ಮಾಡಲಾಗುತ್ತಿದೆ. ಈಗಾಗಲೇ ತೆರಿಗೆ ಘೋಷಣೆ ಮಾಡುವ ಸಂದರ್ಭದಲ್ಲಿ ತಪ್ಪು ಮಾಹಿತಿ ನೀಡಿರುವ ಆಸ್ತಿ ಮಾಲೀಕರಿಗೆ ಸಹ ನೋಟೀಸ್ ನೀಡಲಾಗುವುದು. ಇದರಿಂದಾಗಿ ಪಾಲಿಕೆಯ ಆಸ್ತಿ ತೆರಿಗೆಯ ಬೇಡಿಕೆಯು ಸುಮಾರು ರೂ.800 ಕೋಟಿಗಳಷ್ಟು ಹೆಚ್ಚಾಗುವ ನಿರೀಕ್ಷೆಯಿದೆ ಎಂದು ಪಾಲಿಕೆ ಆಯುಕ್ತರು ತಿಳಿಸಿದರು.

2008-09ನೇ ಸಾಲಿನಿಂದ ಸ್ವಯಂ ಘೋಷಣೆಯಡಿಯಲ್ಲಿ ಸಂಗ್ರಹಿಸಲಾದ ಆಸ್ತಿ ತೆರಿಗೆ ವಿವರಗಳು ಈ ಕೆಳಕಂಡಂತಿದೆ.

| ವರ್ಷ | ಸ್ವತ್ತುಗಳ ಸಂಖ್ಯೆ | ಒಟ್ಟು ತೆರಿಗೆ ಮೊತ್ತ |
|---|---|---|
| 2008-09 | 8,40,000 | ರೂ. 748 ಕೋಟಿಗಳು |
| 2009-10 | 8,64,000 | ರೂ. 795 ಕೋಟಿಗಳು |
| 2010-11ನೇ ಸಾಲು (ಫೆಬ್ರವರಿ 10, 2011ರ ವರೆಗೆ) | 11,41,000 | ರೂ. 1000 ಕೋಟಿಗಳು |

**ಸಾರ್ವಜನಿಕ ಸಂಪರ್ಕಾಧಿಕಾರಿ**